ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಹೆಸರು ಉದ್ದು ಬೆಳೆಯನ್ನು ರೈತರಿಂದ ಖರೀದಿಸುವ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

93 (908) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಮುಂಗಾರಿನ ಮಳೆಯಿಂದ ಹೆಸರು, ಉದ್ದು ಬೆಳೆ ಉತ್ತಮವಾಗಿದ್ದು ಈ ಬೆಳೆಯನ್ನು ರೈತರಿಂದ ಖರೀದಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ;

(ಆ) ರೈತರಿಂದ ಖರೀದಿಸಲು ಸರ್ಕಾರ ಎಷ್ಟು ಬೆಲೆಯನ್ನು ನಿಗದಿಪಡಿಸಲಾಗಿದೆ; ಎಷ್ಟು ಕ್ವಿಂಟಾಲ್ ಧಾನ್ಯವನ್ನು ರೈತರಿಂದ ಖರೀದಿಸಲಾಗಿದೆ; (ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಎಷ್ಟು ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)